# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : 819 |
| ಸದಸ್ಯರ ಹೆಸರು | : ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : 13.07.2023 |
| ಉತ್ತರಿಸುವ ಸಚಿವರು | : ಮಾನ್ಯ ಉಪ ಮುಖ್ಯಮಂತ್ರಿಗಳು |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಬಾಗಲಕೋಟೆ, ವಿಜಯಪುರ ಜಿಲ್ಲೆಗಳ ಕೃಷ್ಣ ಮೇಲ್ದಂಡೆ ಯೋಜನೆಯಡಿಯಲ್ಲಿ ಮುಳುಗಡೆ ಯಾಗುವ 519.56 ಅಡಿಯಿಂದ 524. ಅಡಿಯವರೆಗಿನ ಜಮೀನುಗಳಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಮೀಸಲಿಟ್ಟಿದ್ದ 5000ಕೋಟಿ ರೂ.ಗಳ ಅನುದಾನವನ್ನು ಅವಾರ್ಡ್ ಮಾಡಿ ರೈತರಿಗೆ ನೀಡಲಾಗುವುದೇ; | ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರಡಿಯಲ್ಲಿ ಆಲಮಟ್ಟಿ ಅಣೆಕಟ್ಟು ಹಿನ್ನೀರಿನಲ್ಲಿ 519.600 ಮೀ. ರಿಂದ 524.256 ಮೀ. ವರೆಗೆ 188 ಗ್ರಾಮಗಳ 75,573 ಎಕರೆ ಜಮೀನು ಮುಳುಗಡೆ ಹೊಂದಲಿದ್ದು, ಈ ಪೈಕಿ ಇದುವರೆವಿಗೂ 2,543 ಎಕರೆ ಭೂಸ್ವಾಧೀನ ಮಾಡಲಾಗಿದ್ದು, ಪ್ರಸ್ತುತ ಸುಮಾರು 30,677 ಎಕರೆ ಜಮೀನು ಭೂಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆಯು ವಿವಿಧ ಹಂತದಲ್ಲಿದೆ.<br><br>2022-23ನೇ ಸಾಲಿನ ಆಯವ್ಯಯದಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಯ ಹಂತ-3 ರ ಭೂಸ್ವಾಧೀನ, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ ಕಾಮಗಾರಿಗಳಿಗೆ ಯೋಜನಾ ಕಾಮಗಾರಿಗಳನ್ನೊಳಗೊಂಡಂತೆ ರೂ.5000.00 ಕೋಟಿಗಳ ಅನುದಾನವನ್ನು ಒದಗಿಸುವುದಾಗಿ ಘೋಷಿಸಿದ್ದು, ವಾಸ್ತವವಾಗಿ ಆ ಸಾಲಿನಲ್ಲಿ ಭೂಸ್ವಾಧೀನ, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ ಕಾಮಗಾರಿಗಳಿಗೆ ರೂ.2000.00 ಕೋಟಿಗಳ ಅನುದಾನ ನೀಡಿದ್ದು, ಸದರಿ ವಾರ್ಷಿಕ ಸಾಲಿನ ಅಂತ್ಯಕ್ಕೆ ರೂ.1577.56 ಕೋಟಿಗಳ ವೆಚ್ಚವಾಗಿರುತ್ತದೆ.<br><br>ಪ್ರಸಕ್ತ ಸಾಲಿನ (2023-24) ಪರಿಷ್ಕೃತ ಆಯವ್ಯಯದಲ್ಲಿ ಭೂಸ್ವಾಧೀನ, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ ಕಾಮಗಾರಿಗಳಿಗೆ ರೂ.1200.00 ಕೋಟಿ ಅನುದಾನ ಒದಗಿಸಲಾಗಿರುತ್ತದೆ. |
| ಆ) | ಹಾಗಿದ್ದಲ್ಲಿ, ರಾಜ್ಯ ಸರ್ಕಾರ ಹೊಸ ಆದೇಶವನ್ನೇನಾದರೂ ಸಂಬಂಧಿಸಿದ ಇಲಾಖೆಗೆ ಮಾಡಲಾಗಿದೆಯೇ; (ಮಾಹಿತಿ ಒದಗಿಸುವುದು) | ಸರ್ಕಾರದ ಆದೇಶ ದಿನಾಂಕ 25.01.2023ರಲ್ಲಿ ಹೊರಡಿಸಿರುವ ಒಪ್ಪಂದದ ಐತೀರ್ಪಿನ (Consent Award) ಆದೇಶದನ್ವಯ ಖುಷ್ಕಿ ಜಮೀನಿಗೆ ಪ್ರತಿ ಎಕರೆಗೆ ರೂ. 20.00 ಲಕ್ಷ ಮತ್ತು ನೀರಾವರಿ ಜಮೀನಿಗೆ ಪ್ರತಿ ಎಕರೆಗೆ ರೂ.24.00 ಲಕ್ಷಗಳಂತೆ ಪರಿಹಾರ ಧನ ನಿಗಧಿಪಡಿಸಿದ್ದು, ಅದರನ್ವಯ ಭೂಸ್ವಾಧೀನಕ್ಕೆ ಒಳಪಡುವ ರೈತರ ಜಮೀನುಗಳಿಗೆ ಆಧ್ಯತೆ ಮೇರೆಗೆ ಪರಿಹಾರ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ:ಜಸಂಇ 41 ಡಬ್ಲ್ಯೂಬಿಎಂ 2023

(ಡಿ.ಕೆ.ಶಿವಕುಮಾರ್)
ಉಪ ಮುಖ್ಯಮಂತ್ರಿಗಳು